ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯ, ಗುಬ್ಬಿ

ಸಿ.ಸಿ.ನಂ.274/2020

| | | | |
|---|---|---|---|
| ಹೆಸರು | : | ಮಹಬೂಬ್ ಪಾಷ | ಸಿ .ಡಬ್ಲ್ಯೂ:7 |
| ತಂದೆ ಹೆಸರು | : | ಶಫೀಉಲ್ಲಾ | ಪಿ .ಡಬ್ಲ್ಯೂ:6 |
| ವಯಸ್ಸು | : | 30 ವರ್ಷ | |
| ಉದ್ಯೋಗ | : | ಗಾರೆ ಕೆಲಸ | |
| ವಾಸಸ್ಥಳ | : | ಶಿರಾ | |

ಸಾಕ್ಷಿಯನ್ನು ದಿಃ 18-08-2026 ರಂದು ಕರೆಸಿ ಪ್ರಮಾಣವಚನ ಬೋಧಿಸಲಾಯಿತು.

ಮುಖ್ಯ ವಿಚಾರಣೆಃ ಸಹಾಯಕ ಸರಕಾರಿ ಅಭಿಯೋಜಕರಿಂದಃ

ಸಾಕ್ಷಿಗೆ ಸ್ಥಳ ಮಹಜರ್ ತೋರಿಸಲಾಗಿ ಅದರಲ್ಲಿ ತಮ್ಮ ಸಹಿಯನ್ನು ಗುರುತಿಸಿದ್ದಾರೆ ಅದನ್ನು ನಿಪಿ -3 ಎಂದು ಸಾಕ್ಷಿ ಸಹಿಯನ್ನು ನಿಪಿ -3 (ಎ) ಎಂದು ಗುರುತಿಸಲಾಯಿತು.

ಸುಮಾರು ಆರು ವರ್ಷಗಳ ಹಿಂದೆ ಒಂದು ದಿನ ಶಿರಾ ಪೊಲೀಸರು ನನ್ನನ್ನು ಠಾಣೆಗೆ ಕರೆಸಿ ನಿಪಿ -3 ಕ್ಕೆ ಸಹಿ ಪಡೆದಿದ್ದಾರೆ . ನಿಪಿ-3 ರಲ್ಲಿ ಏನು ಬರೆದಿದೆ ಗೊತ್ತಿಲ್ಲ . ಪೊಲೀಸರ ಕೋರಿಕೆಯ ಮೇರೆಗೆ ನಿಪಿ -3 ಕ್ಕೆ ಸಹಿ ಮಾಡಿದ್ದೇನೆ . ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ .

(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀಸವಾಲು ಮಾಡಲು ಪ್ರಾಜ್ಞ ಸಹಾಯಕ ಸರ್ಕಾರಿ ಅಭಿಯೋಜಕರು ಅನುಮತಿ ಕೋರಿದ್ದು, ಅದರಂತೆ ಅನುಮತಿ ನೀಡಲಾಯಿತು.

ಪಾಟೀಸವಾಲುಃ ಸ ಸ ಅ ರವರಿಂದಃ-

ನಿಪಿ -3 ರಲ್ಲಿನ ವಿವರವನ್ನು ಓದಿ ತಿಳಿಸಲಾಗಿ ಅದನು ಅಲ್ಲಗೆಳದಿದ್ದಾರೆ . ಆರೋಪಿತರಿಗೆ ಸಹಾಯವಾಗಲೆಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

ಪಾಟೀಸವಾಲು: ಆರೋಪಿ ಪರ ವಕೀಲರಿಂದಃ- ಇಲ್ಲ ಎಂದು ತಿಳಿಸಿದ್ದಾರೆ .

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು)

ಓದಿ ಹೇಳಿ ಕೇಳಿದೆ , ಸರಿ ಇದೆ ಎಂದು ಒಪ್ಪಿದ್ದಾರೆ.

Sd/-

(ಅನುಪಮ.ಡಿ )
ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು
ಮತ್ತು ಜೆ.ಎಂ.ಎಫ್.ಸಿ, ಗುಬ್ಬಿ